**ಮಾನ್ಯ 13 ನೇ ಅಧಿಕ ಲಘುವ್ಯವಹಾರಗಳ ನ್ಯಾಯಾಲಯ ಹಾಗೂ ಎಸಿಜೆಎಂ ಮತ್ತು ಎಂಎಸಿಟಿ, ಬೆಂಗಳೂರು**

**ಹೆಸರು** :- **ರವಿ**

**ತಂದೆಯ ಹೆಸರು** :- **ರೇವೇಗೌಡ**

**ವಯಸ್ಸು** :- **50** ವರ್ಷಗಳು

**ಉದ್ಯೋಗ** :- **ಸೆಕ್ಯೂರಿಟಿ**

**ವಿಳಾಸ** :- **ಬೆಂಗಳೂರು**

**ದಿಃ 13.11.2024 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ</u>**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದು.

ಆರ್.ಟಿ ನಗರ ಸಂಚಾರಿ ಪೊಲೀಸ್ ಠಾಣೆಯ ಅಪರಾಧ ಸಂಖ್ಯೆ.47/2024 ರ ಪ್ರಥಮ ವರ್ತಮಾನ ವರದಿಯ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.1 ಎಂದು, ಫಿರ್ಯಾದಿನ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.2 ಎಂದು, ಸ್ಥಳ ಪಂಚನಾಮೆಯ ಹಾಗೂ ಸ್ಥಳ ನಕ್ಷೆಯ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.3 ಎಂದು, ಪೊಲೀಸ್ ನೋಟೀಸ್ ಹಾಗೂ ಉತ್ತರದ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.4 ಎಂದು, ದಿಃ14.05.2024 ರ ಪೊಲೀಸ್ ನೋಟೀಸಿನ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.5 ಎಂದು, ಗಾಯದ

This is a True Copy of the Court Records Online. Authenticated @ districts.ecourtsindia.com/cnr/KABC020366382024/truecopy/order-1.pdf

ಪ್ರಮಾಣ ಪತ್ರದ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.6 ಎಂದು, ಐ ಎಂ ವಿ ವರದಿಯ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.7 ಎಂದು, Indemnity Bond ನ ನಕಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.8 ಎಂದು, ಒಟ್ಟು 37 ಮೆಡಿಕಲ್ ಬಿಲ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.9 ಎಂದು, ಒಟ್ಟು 6 ಔಷದಿ ಚೀಟಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.10 ಎಂದು, ಒಂದು ಡಿಸ್ ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.11 ಎಂದು ಗುರುತಿಸಲಾಯಿತು.

ನನ್ನ ಆಧಾರ್ ಕಾರ್ಡ್ ಹಾಗೂ ಪ್ಯಾನ್ ಕಾರ್ಡ್ ನ ನೋಟರೈಸ್ಡ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. (ಸದರಿ ದಾಖಲೆಗಳ ಮೂಲ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನೋಟರೈಸ್ಡ್ ಪ್ರತಿಗಳೊಂದಿಗೆ ತಾಳೆ ನೋಡಿ ಸರಿ ಇದೆ ಎಂದು ಒಪ್ಪಿಕೊಂಡು ಮೂಲ ಪ್ರತಿಗಳನ್ನು ಸಾಕ್ಷಿದಾರರಿಗೆ ವಾಪಸ್ಸು ಮಾಡಲಾಯಿತು.) ಸದರಿ ದಾಖಲೆಗಳನ್ನು ನಿ.ಪಿ.12 ಮತ್ತು 13 ಎಂದು ಗುರುತಿಸಲಾಯಿತು.

ಆದ್ದರಿಂದ ನನ್ನ ಅರ್ಜಿಯಲ್ಲಿ ಕೇಳಿದಂತೆ ಆದೇಶ ಮಾಡಬೇಕೆಂದು ಪ್ರಾರ್ಥಿಸುತ್ತೇನೆ.

<u>ಪಾಟೀ ಸವಾಲುಃ 1 ನೇ ಎದುರುದಾರರ ಪರ ವಕೀಲರಿಂದ.</u>

(1 ನೇ ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು).

This is a True Copy of the Court Records Online. Authenticated @ districts.ecourtsindia.com/cnr/KABC020366382024/truecopy/order-1.pdf

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).**

ಓ ಹೇ ಕೇ ಸ ಇ ಒ

**13** ನೇ ಎಎಸ್‌ಸಿಜೆ ಮತ್ತು ಎಸಿಜೆಎಂ
ಬೆಂಗಳೂರು

This is a True Copy of the Court Records Online. Authenticated @ districts.ecourtsindia.com/cnr/KABC020366382024/truecopy/order-1.pdf